RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

## ವಿಶೇಷ ರಾಜ್ಯ ಪತ್ರಿಕೆ

| ಭಾಗ-V<br>Part-V | ಬೆಂಗಳೂರು, ಗುರುವಾರ, ಮೇ ೨೫, ೨೦೧೭ (ಜ್ಯೇಷ್ಠ ೪, ಶಕ ವರ್ಷ ೧೯೩೯)<br>Bengaluru, Thursday, May 25, 2017 (Jyeshta 4, Shaka Varsha 1939) | ನಂ. ೪೫೨<br>No. 452 |
|---|---|---|

### ಕರ್ನಾಟಕ ವಿಧಾನ ಪರಿಷತ್ ಸಚಿವಾಲಯ

### ಅಧಿಸೂಚನೆ

**ಸಂಖ್ಯೆ: ಕವಿಪ:ಆ-1:46:ಖಾಹುಭ:2017, ಬೆಂಗಳೂರು-560 001, ದಿನಾಂಕ: 25.05.2017**

| | |
|---|---|
| ವಿಷಯ: | ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯದಲ್ಲಿ ಖಾಲಿ ಇರುವ ವಿವಿಧ ವೃಂದದ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಬಗ್ಗೆ. |

ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯದ (ನೇಮಕಾತಿ ಹಾಗೂ ಸೇವಾ ಷರತ್ತುಗಳು) ನಿಯಮಗಳು 2003ರ ತಿದ್ದುಪಡಿ ಅಧಿಸೂಚನೆ 2005, 2011 ಮತ್ತು 2016ರ ರೀತ್ಯಾ ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯದಲ್ಲಿ ಖಾಲಿ ಇರುವ ವರದಿಗಾರರು, ಕಿರಿಯ ಸಹಾಯಕರು, ಬೆರಳಚ್ಚುಗಾರರು, ವಾಹನ ಚಾಲಕರು ಮತ್ತು ಗ್ರೂಪ್ 'ಡಿ' ನೌಕರರ ಹುದ್ದೆಗಳಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಹುದ್ದೆಗಳ ವಿವರ ಈ ಕೆಳಕಂಡಂತಿರುತ್ತದೆ.

| ಕ್ರ. ಸಂ. | ಹುದ್ದೆಯ ಹೆಸರು | ವೇತನ ಶ್ರೇಣಿ | ಖಾಲಿ ಇರುವ ಹುದ್ದೆಗಳ ಸಂಖ್ಯೆ | ಹುದ್ದೆಗಳ ವರ್ಗೀಕರಣ | | ವಿದ್ಯಾರ್ಹತೆ |
|---|---|---|---|---|---|---|
| 01 | ಆಂಗ್ಲ ವರದಿಗಾರರು | 20000-36300 | 04 | ಹೈ-ಕ ಸ್ಥಳೀಯ ವೃಂದ ಪರಿಶಿಷ್ಟಜಾತಿ (ಇತರೆ) ಬ್ಯಾಕ್‌ಲಾಗ್ | 01 | ಆಂಗ್ಲ ವರದಿಗಾರರು<br>ಅ)ಅಂಗೀಕೃತ ವಿಶ್ವವಿದ್ಯಾಲಯದಿಂದ ಪದವಿಯನ್ನು ಹೊಂದಿರಬೇಕು.<br>ಆ) i) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯವರು ನಡೆಸುವ ಆಂಗ್ಲ ಬೆರಳಚ್ಚು ಹಿರಿಯ ದರ್ಜೆ, ಆಂಗ್ಲ ಶೀಘ್ರಲಿಪಿ ಪ್ರೌಢದರ್ಜೆ, ಶೀಘ್ರಲಿಪಿ ಪ್ರವೀಣದರ್ಜೆ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರತಕ್ಕದ್ದು.<br>ii)ಹಿಂದಿ ಶೀಘ್ರಲಿಪಿ ಪ್ರವೀಣ ದರ್ಜೆ ಪರೀಕ್ಷೆಯಲ್ಲಿ ಉತೀರ್ಣರಾದವರಿಗೆ ಆದ್ಯತೆ ನೀಡಲಾಗುವುದೆ. |
| | | | | ಹೈ-ಕ ಸ್ಥಳೀಯ ವೃಂದ ಪರಿಶಿಷ್ಟ ಪಂಗಡ (ಇತರೆ) ಬ್ಯಾಕ್‌ಲಾಗ್ | 01 | |
| | | | | ಪ್ರವರ್ಗ-2ಎ (ಗ್ರಾಮೀಣ) ಬ್ಯಾಕ್‌ಲಾಗ್ | 01 | |
| | | | | ಪ್ರವರ್ಗ-2ಬಿ (ಇತರೆ) ಬ್ಯಾಕ್‌ಲಾಗ್ | 01 | |
| 02. | ಕನ್ನಡ ವರದಿಗಾರರು | 20000-36300 | 04 | ಪರಿಶಿಷ್ಟಜಾತಿ (ಇತರೆ) | 01 | ಕನ್ನಡ ವರದಿಗಾರರು<br>ಅ)ಅಂಗೀಕೃತ ವಿಶ್ವವಿದ್ಯಾಲಯದಿಂದ ಪದವಿಯನ್ನು ಹೊಂದಿರಬೇಕು.<br>ಆ) i) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯವರು ನಡೆಸುವ ಕನ್ನಡ ಬೆರಳಚ್ಚು ಹಿರಿಯ ದರ್ಜೆ, ಕನ್ನಡ |
| | | | | ಪ್ರವರ್ಗ-2ಎ (ಇತರೆ) | 01 | |

| | | | | | | |
|---|---|---|---|---|---|---|
| | | | | ಸಾಮಾನ್ಯ (ಕಮಾಲ) | 01 | ಶೀಘ್ರಲಿಪಿ ಪ್ರೌಢ ದರ್ಜೆ, ಶೀಘ್ರಲಿಪಿ ಪ್ರವೀಣ ದರ್ಜೆ ಪರೀಕ್ಷೆಯಲ್ಲಿ ಉತೀರ್ಣರಾಗಿರತಕ್ಕದ್ದು. ii)ಹಿಂದಿ ಶೀಘ್ರಲಿಪಿ ಪ್ರವೀಣ ದರ್ಜೆ ಪರೀಕ್ಷೆಯಲ್ಲಿ ಉತೀರ್ಣರಾದವರಿಗೆ ಆದ್ಯತೆ ನೀಡಲಾಗುವುದು. |
| | | | | ಪ್ರವರ್ಗ–I (ಮಹಿಳೆ) | 01 | |
| 03. | ಕಿರಿಯ ಸಹಾಯಕರು | 11600–21000 | 03 | ಹೈ–ಕ ಸ್ಥಳೀಯ ವೃಂದ ಪರಿಶಿಷ್ಟ ಜಾತಿ (ಇತರೆ) | 01 | ಅ)ಅಂಗೀಕೃತ ವಿಶ್ವವಿದ್ಯಾಲಯದಿಂದ ಪದವಿಯನ್ನು ಹೊಂದಿರಬೇಕು. |
| | | | | ಪರಿಶಿಷ್ಟಜಾತಿ (ಇತರೆ) | 01 | |
| | | | | ಪ್ರವರ್ಗ–2ಎ (ಇತರೆ) | 01 | |
| 04. | ಬೆರಳಚ್ಚುಗಾರ | 11600–21000 | 01 | ಪ್ರವರ್ಗ–2ಎ (ಇತರೆ) | 01 | ಅ)ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಹೊಂದಿರಬೇಕು. ಅಂಗೀಕೃತ ವಿಶ್ವವಿದ್ಯಾಲಯದಿಂದ ಪದವಿ ಹಾಗೂ ಮಾನ್ಯತೆ ಪಡೆದಿರುವ ಸಂಸ್ಥೆಯಿಂದ ಒಂದು ವರ್ಷದ ಕಂಪ್ಯೂಟರ್ ಕೋರ್ಸ್‌ನ್ನು ಮಾಡಿರುವ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು. ಆ) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯವರು ನಡೆಸುವ ಕನ್ನಡ ಮತು ಆಂಗ್ಲ ಭಾಷೆಯ ಹಿರಿಯ ಶ್ರೇಣಿ ಬೆರಳಚ್ಚು ಪರೀಕ್ಷೆಯಲ್ಲಿ ಉತೀರ್ಣರಾಗಿರಬೇಕು ಹಾಗೂ ಶೀಘ್ರಲಿಪಿಯಲ್ಲಿ ಪರಿಣಿತಿ ಹೊಂದಿದವರಿಗೆ ಆದ್ಯತೆ ನೀಡಲಾಗುವುದು. |
| 05. | ವಾಹನ ಚಾಲಕರು | 11600–21000 | 01 | ಪರಿಶಿಷ್ಟಜಾತಿ (ಮಹಿಳೆ) ಬ್ಯಾಕ್‌ಲಾಗ್ | 01 | ಅ)ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರತಕ್ಕದ್ದು.<br><br>ಆ)ಮೋಟಾರುಕಾರು/ಭಾರಿ ವಾಹನ ಚಾಲನಾ ಪರಿಣಿತಿಯನ್ನು ಹೊಂದಿರತಕ್ಕದ್ದು.<br><br>ಇ) ವಾಹನ ಚಾಲನಾ ಪರಿಣಿತಿಯ ಬಗ್ಗೆ ಕನಿಷ್ಟಪಕ್ಷ 03 ವರ್ಷಗಳ ಅನುಭವ ಹೊಂದಿರತಕ್ಕದ್ದು.<br><br>ಈ)ಪ್ರಥಮ ಚಿಕಿತ್ಸಾ ಪ್ರಮಾಣ ಪತ್ರವನ್ನು ಹೊಂದಿರತಕ್ಕದ್ದು. |
| 06. | ಗ್ರೂಪ್ 'ಡಿ' | 9600–14550 | 05 | ಪ್ರವರ್ಗ–2ಬಿ (ಮಹಿಳೆ) | 01 | 7ನೇತರಗತಿಯಲ್ಲಿ ಉತ್ತೀರ್ಣರಾಗಿರಬೇಕು. |
| | | | | ಪ್ರವರ್ಗ–2ಎ (ಗ್ರಾಮೀಣ) | 01 | |
| | | | | ಪರಿಶಿಷ್ಟ ಪಂಗಡ (ಮಹಿಳೆ) | 01 | |
| | | | | ಸಾಮಾನ್ಯ (ಮಾಜಿ ಸೈನಿಕ) | 01 | |
| | | | | ಪರಿಶಿಷ್ಟ ಜಾತಿ (ಇತರೆ) | 01 | |

01. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:12.06.2017 ರಂದು ಸಂಜೆ 04.00 ಗಂಟೆಯೊಳಗೆ.

02. ಅರ್ಜಿ ಸಲ್ಲಿಸಬೇಕಾದ ವಿಳಾಸ: ಕಾರ್ಯದರ್ಶಿ, ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯ, ಅಂಚೆ ಪೆಟ್ಟಿಗೆ ಸಂಖ್ಯೆ: 5079, ಮೊದಲನೆ ಮಹಡಿ, ವಿಧಾನಸೌಧ, ಬೆಂಗಳೂರು–560 001.

03. ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯದ ನಿಯಮಾವಳಿಗನುಸಾರ ಮೇಲ್ಕಂಡ ಹುದ್ದೆಗಳ ಭರ್ತಿಗಾಗಿ ಅರ್ಹತೆಯುಳ್ಳ ಅಭ್ಯರ್ಥಿಗಳು ಅರ್ಜಿ ನಮೂನೆ–1ರ ದ್ವಿಪ್ರತಿಯಲ್ಲಿ ಅರ್ಜಿಗಳನ್ನು ಸರ್ಕಾರಿ ಪುಸ್ತಕ ಮಳಿಗೆಯಿಂದ ಪಡೆದು ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ಸಲ್ಲಿಸಬೇಕು.

04. **ಶುಲ್ಕ:**

ಅ) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ–1 ಅಭ್ಯರ್ಥಿಗಳಿಗೆ ಅರ್ಜಿ ಶುಲ್ಕವಿರುವುದಿಲ್ಲ.

ಆ) ವರದಿಗಾರರು, ಕಿರಿಯ ಸಹಾಯಕರು, ಬೆರಳಚ್ಚುಗಾರ, ವಾಹನ ಚಾಲಕರು ಮತ್ತು ಗ್ರೂಪ್ 'ಡಿ' ಹುದ್ದೆಗಳಿಗೆ ಸಂಬಂಧಪಟ್ಟಂತೆ ಸಾಮಾನ್ಯ ಅಭ್ಯರ್ಥಿಗಳು ₹300/–ಗಳ ಮತ್ತು ಇತರೆ ಹಿಂದುಳಿದ ವರ್ಗದ ಅಭ್ಯರ್ಥಿಗಳು ₹150/–ಗಳ ಡಿ.ಡಿ. ಅಥವಾ ಪೇ ಆರ್ಡರ್ ಅನ್ನು ಅಧಿಸೂಚನೆಯ ದಿನಾಂಕದಿಂದ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ಕಾರ್ಯದರ್ಶಿ, ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯ, ಅಂಚೆ ಪೆಟ್ಟಿಗೆ ಸಂಖ್ಯೆ:5079, ವಿಧಾನಸೌಧ, ಬೆಂಗಳೂರು– 560 001 ಇವರ ಹೆಸರಿನಲ್ಲಿ ಖರೀದಿಸಿ ಅರ್ಜಿಯಲ್ಲಿ ವಿವರದೊಂದಿಗೆ ಲಗತ್ತಿಸತಕ್ಕದ್ದು. ಒಮ್ಮೆ ಪಾವತಿಸಿದ ಶುಲ್ಕವನ್ನು ಯಾವುದೇ ಕಾರಣಕ್ಕೂ ಹಿಂದಿರುಗಿಸಲಾಗುವುದಿಲ್ಲ.

05. **ಕನಿಷ್ಠ ವಯೋಮಿತಿ:** ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳು 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು.

**ಗರಿಷ್ಠ ವಯೋಮಿತಿ:–**

| | | |
|---|---|---|
| ಸಾಮಾನ್ಯ ವರ್ಗ | : | 35 ವರ್ಷ |
| ಪ್ರವರ್ಗ IIಎ, IIಬಿ, IIIಎ ಮತ್ತು IIIಬಿ | : | 38 ವರ್ಷ |
| ಪ.ಜಾ/ಪ.ಪಂ/ಪ್ರವರ್ಗ – I | : | 40 ವರ್ಷ |

ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಾವಳಿ 1977ರ ನಿಯಮ 6(3)ರಲ್ಲಿ ತಿಳಿಸಲಾಗಿರುವ ಅಭ್ಯರ್ಥಿಗಳಿಗೆ ಗರಿಷ್ಠ ವಯೋಮಿತಿಯಲ್ಲಿ ರಿಯಾಯಿತಿ ನೀಡಲಾಗುವುದು.

06. ಸರ್ಕಾರಿ ಇಲಾಖೆಗಳಲ್ಲಿ ಕೆಲಸ ಮಾಡುತ್ತಿರುವ ಅಭ್ಯರ್ಥಿಗಳು ತಮ್ಮ ನೇಮಕಾತಿ ಪ್ರಾಧಿಕಾರದ ಮೂಲಕ ಅನುಬಂಧ–ಡಿ ಸರ್ಟಿಫಿಕೇಟ್‌ನೊಂದಿಗೆ ನಿಗದಿತ ದಿನಾಂಕದೊಳಗೆ ಅರ್ಜಿ ಸಲ್ಲಿಸಬೇಕು.

07. ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಾವಳಿ 1977ರ ಪ್ರಕಾರ ರಾಜ್ಯ ಸಿವಿಲ್ ಸೇವೆಗಳಲ್ಲಿ ಹುದ್ದೆಗಳಿಗೆ ನೇಮಕಾತಿ ಹೊಂದಲು ಅರ್ಹತೆ ಹೊಂದಿರುವ ಅಭ್ಯರ್ಥಿಗಳು ಮಾತ್ರ ನೇಮಕಾತಿಗೆ ಅರ್ಹರಾಗಿರುತ್ತಾರೆ.

08. ಆಯ್ಕೆಯಾದ ಯಾವುದೇ ಅಭ್ಯರ್ಥಿಯು ನೇಮಕಾತಿ ಪ್ರಾಧಿಕಾರಕ್ಕೆ ಅವನು/ಅವಳು ನೇಮಿಸಿರುವ ಕೆಲಸಕ್ಕೆ ದೈಹಿಕವಾಗಿ ಹಾಗೂ ಮಾನಸಿಕವಾಗಿ ಯೋಗ್ಯವೆನಿಸಿದ ಹೊರತು ಅವನನ್ನು/ಅವಳನ್ನು ಆ ಹುದ್ದೆಗೆ ನೇಮಿಸಲಾಗುವುದಿಲ್ಲ.

09. ಯಾವುದೇ ವ್ಯಕ್ತಿಯು ತನ್ನ ಉಮೇದುವಾರಿಕೆ ಬಗ್ಗೆ ಅಧಿಕಾರಿಗಳು ಮತ್ತು ಅಧಿಕಾರೇತರರುಗಳಿಂದ ಒತ್ತಡ ತಂದಲ್ಲಿ ಅಂತಹ ಅಭ್ಯರ್ಥಿಗಳು ಸದರಿ ಹುದ್ದೆಯ ನೇಮಕಾತಿಗೆ ಅನರ್ಹರಾಗಿರುತ್ತಾರೆ.

10. ಅಭ್ಯರ್ಥಿಗಳು ಅರ್ಜಿಯೊಂದಿಗೆ ಈ ಕೆಳಗೆ ತಿಳಿಸಲಾಗಿರುವ ದಾಖಲೆಗಳನ್ನು ದ್ವಿಪ್ರತಿಗಳಲ್ಲಿ ಲಗತ್ತಿಸಬೇಕು.

(ಅ) ಹುಟ್ಟಿದ ತಾರೀಖಿಗೆ ಆಧಾರದ ದಾಖಲೆ ಪ್ರತಿ ಸಲ್ಲಿಸತಕ್ಕದ್ದು.

(ಆ) ಹುದ್ದೆಗೆ ಸೂಚಿಸಲಾಗಿರುವ ವಿದ್ಯಾರ್ಹತೆಗಳಿಗೆ ಸಂಬಂಧಿಸಿದ ಪದವಿ ಪ್ರಮಾಣ ಪತ್ರ ಹಾಗೂ ಅಂಕಪಟ್ಟಿಗಳನ್ನೊಳಗೊಂಡಂತೆ ಅರ್ಜಿಯೊಂದಿಗೆ ಲಗತ್ತಿಸುವ ಎಲ್ಲಾ ದಾಖಲೆಗಳ ಪ್ರತಿಗಳನ್ನು ಪತ್ರಾಂಕಿತ ಅಧಿಕಾರಿಗಳಿಂದ ದೃಢೀಕರಿಸಿ ಸಲ್ಲಿಸತಕ್ಕದ್ದು.

(ಇ) ಜಾತಿ/ಪ್ರವರ್ಗ ದೃಢೀಕರಿಸುವ ಪ್ರಮಾಣ ಪತ್ರದ ನಕಲು ಪ್ರತಿಯನ್ನು ಸರ್ಕಾರದಿಂದ ನಿಗದಿಪಡಿಸಿರುವ ನಮೂನೆಯಲ್ಲಿ ಸಲ್ಲಿಸತಕ್ಕದ್ದು.

(ಈ) ಅರ್ಜಿ ನಮೂನೆಯಲ್ಲಿ ನಿಗದಿಪಡಿಸಿರುವಂತೆ ಕೇಂದ್ರ ಮತ್ತು ರಾಜ್ಯ ಸರ್ಕಾರದ ಪತ್ರಾಂಕಿತ ಅಧಿಕಾರಿಗಳು, ವೈದ್ಯಾಧಿಕಾರಿಗಳು, ಶಾಲಾ ಮುಖ್ಯೋಪಾಧ್ಯಾಯರು, ಪ್ರಾಂಶುಪಾಲರು, ರಾಜ್ಯ ಸಭೆ ಮತ್ತು ಲೋಕಸಭೆ ಸದಸ್ಯರು, ವಿಧಾನ ಸಭೆ ಮತ್ತು ವಿಧಾನ ಪರಿಷತ್ತು ಸದಸ್ಯರು ಇವರುಗಳಲ್ಲಿ ಯಾರೇ ಇಬ್ಬರು ಗಣ್ಯ ವ್ಯಕ್ತಿಗಳಿಂದ 06 ತಿಂಗಳೊಳಗೆ ಪಡೆದ ನಡತೆ ಪ್ರಮಾಣ ಪತ್ರ ಹಾಗೂ ಶಾಲಾ ನಡವಳಿಕೆಯ ಪ್ರಮಾಣ ಪತ್ರ ಸಲ್ಲಿಸತಕ್ಕದ್ದು.

(ಉ) 1 ರಿಂದ 10ನೇ ತರಗತಿಯವರೆಗೆ ಗ್ರಾಮಾಂತರ ಪ್ರದೇಶಗಳಲ್ಲಿ ಮತ್ತು ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ್ದಕ್ಕಾಗಿ ಸಂಬಂಧಪಟ್ಟ ಶಿಕ್ಷಣಾಧಿಕಾರಿಗಳಿಂದ ಪಡೆದ ದೃಢೀಕರಣ ಪತ್ರ ಸಲ್ಲಿಸತಕ್ಕದ್ದು.

ಊ) ಮಾಜಿ ಸೈನಿಕರು ಮತ್ತು ಹೈದರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿ ಮೀಸಲಾತಿ ಅಡಿಯಲ್ಲಿ ಅರ್ಜಿ ಸಲ್ಲಿಸುವವರು ಸಂಬಂಧಪಟ್ಟ ಪ್ರಾಧಿಕಾರದಿಂದ ಪಡೆದ ದೃಢೀಕರಣ ಪತವ್ರನ್ನು ಸಲ್ಲಿಸತಕ್ಕದ್ದು. ಮಾಜಿ ಸೈನಿಕ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಸದರಿ ಹುದ್ದೆಗೆ ಸಾಮಾನ್ಯ(ಇತರೆ) ಅಭ್ಯರ್ಥಿಗಳನ್ನು ನಿಯಮಾನುಸಾರ ಪರಿಗಣಿಸಲಾಗುವುದು.

ಋ) ವಾಹನ ಚಾಲಕ ಹುದ್ದೆಗ ಅರ್ಹ ಮಹಿಳಾ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಸದರಿ ವರ್ಗಕ್ಕೆ ಸೇರಿದ ಅರ್ಹ ಪುರುಷ ಅಭ್ಯರ್ಥಿಯನ್ನು ನಿಯಮಾನುಸಾರ ಪರಿಗಣಿಸಲಾಗುವುದು.

**ಸೂಚನೆ: ಅಭ್ಯರ್ಥಿಗಳು ಮೂಲ ಪ್ರಮಾಣ ಪತ್ರಗಳನ್ನು ಲಗತ್ತಿಸತಕ್ಕದ್ದಲ್ಲ.**

11. ಅರ್ಜಿಗಳನ್ನು ನಮೂನೆ –1ರ ದ್ವಿಪ್ರತಿಯಲ್ಲಿ ಅಗತ್ಯವುಳ್ಳ ದಾಖಲೆಗಳನ್ನು ಲಗತ್ತಿಸಿ, ಕೊನೆಯ ದಿನಾಂಕ:12.06.2017 ರಂದು ಸಂಜೆ: 4.00 ಗಂಟೆಯ ಒಳಗಾಗಿ ಖುದ್ದಾಗಿ ಅಥವಾ ಅಂಚೆಯ ಮೂಲಕ ತಲುಪಿಸತಕ್ಕದ್ದು. ಸದರಿ ದಿನಾಂಕವು ಸಾರ್ವಜನಿಕ ರಜಾ ದಿನವಾದಲ್ಲಿ ಮುಂದಿನ ಕೆಲಸದ ದಿನದಂದು ಅರ್ಜಿಯನ್ನು ಸಲ್ಲಿಸತಕ್ಕದ್ದು.

12. 2003ನೇ ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯದ (ನೇಮಕಾತಿ ಮತ್ತು ಸೇವಾ ಷರತ್ತುಗಳು) ನಿಯಮಾವಳಿಗಳ ರೀತ್ಯಾ ಸದರಿ ಹುದ್ದೆಗಳ ಆಯ್ಕೆ ಪ್ರಕ್ರಿಯೆಯ ಕಾರ್ಯವಿಧಾನವನ್ನು ನಿಗಧಿಪಡಿಸುವ ಅಧಿಕಾರ ಸಕ್ಷಮ ಪ್ರಾಧಿಕಾರಕ್ಕೆ ಇರುತ್ತದೆ.

13. ದೃಢೀಕೃತ ಪ್ರತಿಗಳಿಗೆ ಸಹಿಮಾಡದೆ, ಕೇವಲ ಸ್ಪೆಸಿಮನ್ ಸಹಿಯ ಮೊಹರನ್ನು ಪರಿಗಣಿಸಲಾಗುವುದಿಲ್ಲ.

**ಸೂಚನೆ: –**

01. ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಿದ ನಂತರ ಆ ಸಂಬಂಧ ಯಾವುದೇ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.
02. ಅಗತ್ಯ ಪ್ರಮಾಣ ಪತ್ರಗಳನ್ನು ಲಗತ್ತಿಸದೆ ಇರುವ ಹಾಗೂ ಲೋಪ/ಸರಿಯಾದ ಮಾಹಿತಿಯೊಂದಿಗೆ ಭರ್ತಿ ಮಾಡದ ಅಪೂರ್ಣ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
03. ಅರ್ಜಿಗಳ ಮೇಲೆ ಹುದ್ದೆಯ ಹೆಸರನ್ನು ದಪ್ಪ ಅಕ್ಷರಗಳಲ್ಲಿ ನಮೂದಿಸತಕ್ಕದ್ದು.
04. ನಿಗದಿತ ದಿನಾಂಕ ಮತ್ತು ಸಮಯದ ನಂತರ ಬಂದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಮಾನ್ಯ ಸಭಾಪತಿಯವರ ಆದೇಶಾನುಸಾರ,

**ಮೋಹನ್ ಕೆ.ಮುಗಳಿ**
ಅಧೀನ ಕಾರ್ಯದರ್ಶಿ,
ಕರ್ನಾಟಕ ವಿಧಾನ ಪರಿಷತ್ತು.

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ7) ಪ್ರತಿಗಳು: 250